# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1011(1130) |
| ಸದಸ್ಯರು ಹೆಸರು | : | ಶ್ರೀ ಜಗದೇವ್ ಗುತ್ತೇದಾರ್(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.08.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ರೌಡಿಗಳ ಅಟ್ಟಹಾಸ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ, ಆದಾಗ್ಯೂ ಕಲ್ಯಾಣ ಕರ್ನಾಟಕ ಭಾಗದ ರೌಡಿ ಶೀಟರ್‌ಗಳ ಚಟುವಟಿಕೆಗಳ ಮೇಲೆ ಸೂಕ್ತ ನಿಗಾ ಇಟ್ಟಿದ್ದು, ಯಾವುದೇ ಅಹಿತಕರ ಘಟನೆಗಳು ಜರುಗದಂತೆ ರೌಡಿ ಜನರ ವಿರುದ್ಧ ಕಾನೂನಿನಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ರೌಡಿ ಶೀಟರ್‌ಗಳ ಮೇಲೆ ಕಾಲ ಕಾಲಕ್ಕೆ ಮುಂಜಾಗ್ರತಾ ಕ್ರಮ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಬಾಂಡ್ ಓವರ್ ಮಾಡಲಾಗುತ್ತಿದೆ.<br><br>ರೌಡಿ ಶೀಟರ್‌ಗಳ ಚಟುವಟಿಕೆಗಳ ಮೇಲೆ ನಿಗಾ ಇಟ್ಟಿದ್ದು, ಕಾನೂನು ಬಾಹಿರ ಕೃತ್ಯ ಜರುಗಿಸುವುದು ಕಂಡು ಬಂದಲ್ಲಿ, ರೌಡಿ ಶೀಟರ್ ಗಳನ್ನು ಗಡಿಪಾರು ಮಾಡುವ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಬಂದಿದ್ದರೆ, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ಕಳೆದ ಮೂರು ವರ್ಷಗಳಲ್ಲಿ ಗಡಿಪಾರು ಮಾಡಲಾಗಿರುವ ರೌಡಿಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕ ಭಾಗದಲ್ಲಿ 2023,2024 ಮತ್ತು 2025ನೇ ಸಾಲಿನಲ್ಲಿ ಕ್ರಮವಾಗಿ 92, 115 & 23 ರೌಡಿಗಳನ್ನು ಗಡಿಪಾರು ಮಾಡಲಾಗಿದೆ. |
| ಈ) | ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ರೌಡಿಗಳನ್ನು ರೌಡಿಶೀಟರ್ ಪಟ್ಟಿಯಿಂದ ಕೈಬಿಡಲಾಗಿದೆ? | 2023, 2024 & 2025ರ ಸಾಲಿನಲ್ಲಿ ಕ್ರಮವಾಗಿ 1513, 643 & 1141 ರೌಡಿಗಳನ್ನು ರೌಡಿಶೀಟರ್ ಪಟ್ಟಿಯಿಂದ ಕೈಬಿಡಲಾಗಿದೆ. |

ಹೆಚ್‌ಡಿ 398 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು.